ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 195
26–1–2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 195

## ಬೆಂಗಳೂರಿನಲ್ಲಿ ಬಾಂಗ್ಲಾದೇಶಿ ಮಹಿಳೆ ಮೇಲೆ ಅತ್ಯಾಚಾರ ಎಸಗಿ ಕೊಲೆ

**ಬೆಂಗಳೂರು:** ಕಲ್ಕೆರೆಯ ದುಬಾರಿ ವಸತಿ ಅಪಾರ್ಟ್‌ಮೆಂಟ್‌ನಲ್ಲಿ ಮನೆಗೆಲಸ ಮಾಡುತ್ತಿದ್ದ ಬಾಂಗ್ಲಾದೇಶದ 28 ವರ್ಷದ ಮಹಿಳೆ ಶುಕ್ರವಾರ ಬೆಳಗ್ಗೆ ಕಲ್ಕೆರೆ ಕೆರೆ ಬಳಿ ಶವವಾಗಿ ಪತ್ತೆಯಾಗಿದ್ದಾರೆ.



ಮಹಿಳೆ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಆರೋಪಿಗಳು ಆಕೆಯ ತಲೆ ಮೇಲೆ ಕಲ್ಲು ಎತ್ತಿಹಾಕಿ ಕೊಂದಿದ್ದು, ಈ ಸಂಬಂಧ ರಾಮಮೂರ್ತಿನಗರ ನಗರ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಸಂತ್ರಸ್ತೆಯನ್ನು ನಜ್ಮಾ ಎಂದು ಗುರುತಿಸಲಾಗಿದ್ದು, ಕಲ್ಕೆರೆ ನಿವಾಸಿಯಾಗಿದ್ದರು. ಆಕೆಯ ಪತಿ ಸುಮನ್ ಬಿಬಿಎಂಪಿಯಲ್ಲಿ ಪೌರಕಾರ್ಮಿಕರಾಗಿದ್ದಾರೆ.

ಮೂರು ಮಕ್ಕಳ ತಾಯಿಯಾಗಿರುವ ನಜ್ಮಾ ಗುರುವಾರ ಮಧ್ಯಾಹ್ನ ಕೆಲಸ ಮುಗಿಸಿ ಮನೆಗೆ ಮರಳುತ್ತಿದ್ದಾಗ ಅವರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಶಂಕಿಸಲಾಗಿದೆ.

ಪತ್ನಿ ಮನೆಗೆ ಹಿಂತಿರುಗದ ಕಾರಣ, ಆಕೆಯ ಪತಿ ಹುಡುಕಾಟ ನಡೆಸಿದ್ದರು ಮತ್ತು ನಂತರ ಹಿಂತಿರುಗಬಹುದೆಂದು ಭಾವಿಸಿ ಮನೆಗೆ ಹಿಂತಿರುಗಿ ಕಾಯುತ್ತಿದ್ದರು. ಆದರೆ ಶುಕ್ರವಾರ ಬೆಳಗ್ಗೆ, ಬೆಳಗಿನ ವಾಕರ್ ಒಬ್ಬರು ಕೆರೆಯ ಬಳಿ ಶವವನ್ನು ನೋಡಿ ಪೊಲೀಸ್ ನಿಯಂತ್ರಣ ಕೊಠಡಿಗೆ ಕರೆ ಮಾಡಿ ಘಟನೆಯ ಬಗ್ಗೆ ಮಾಹಿತಿ ನೀಡಿದ್ದಾರೆ.

ಮೊದಲ ನೋಟದಲ್ಲೇ ಕೊಲೆಗೂ ಮುನ್ನ ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವುದು ಕಂಡುಬರುತ್ತಿದೆ. ಘಟನೆ ಗುರುವಾರ ಸಂಜೆ ಅಥವಾ ರಾತ್ರಿ ನಡೆದಿರಬೇಕು. ಸಂತ್ರಸ್ತೆ ಅಕ್ರಮ ಮಾರ್ಗದ ಮೂಲಕ ದೇಶ ಪ್ರವೇಶಿಸಿರುವ ಶಂಕೆ ವ್ಯಕ್ತವಾಗಿದೆ. ಆಕೆಯ ಬಗ್ಗೆ ಯಾವುದೇ ಸ್ಥಳೀಯ ದಾಖಲೆ ಪುರಾವೆಗಳಿಲ್ಲ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಆದಾಗ್ಯೂ, ಆಕೆಯ ಪತಿ ಬಳಿ ದಾಖಲೆಗಳಿದ್ದು, ಅವರು ಬಾಂಗ್ಲಾದೇಶದವರೇ ಎಂದು ನಾವು ಪರಿಶೀಲಿಸುತ್ತಿದ್ದೇವೆ. ಕುಟುಂಬವು ಕಳೆದ ಐದು ವರ್ಷಗಳಿಂದ ನಗರದಲ್ಲಿ ವಾಸಿಸುತ್ತಿದೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆವಲಹಳ್ಳಿಯ ವಿರ್ಗೋ ನಗರದಲ್ಲಿರುವ ಖಾಸಗಿ ಆಸ್ಪತ್ರೆಯ ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ" ಎಂದು ಅಧಿಕಾರಿ ಹೇಳಿದ್ದಾರೆ.

## ಬಲವಂತವಾಗಿ ಸಾಲ ವಸೂಲಾತಿ: ಪರಿಶೀಲಿಸಲು ಜಿಲ್ಲಾಡಳಿತಗಳಿಗೆ ರಾಜ್ಯ ಮಹಿಳಾ ಆಯೋಗ ಸೂಚನೆ

**ಬೆಂಗಳೂರು:** ಸ್ಥಳೀಯ ಕಿರುಬಂಡವಾಳ ಸಂಸ್ಥೆಗಳಿಂದ ಪಡೆದ ಸಾಲಗಳನ್ನು ಬಲವಂತವಾಗಿ ವಸೂಲಿ ಮಾಡುವುದರಿಂದ ಅನೇಕ ವ್ಂಹಿಳ್ಂ೦ಂ ಆಘಾತಕ್ಕೊಳಗಾಗಿದ್ದಾರೆ ಎಂದು ಹೇಳಿರುವ ರಾಜ್ಯ ಮಹಿಳಾ ಆಯುಕ್ತೆ ನಾಗಲಕ್ಷ್ಮಿ ಚೌಧರಿ, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಮೇಲೆ ನಿಗಾ ಇಡಲು ಮತ್ತು ಸಂತ್ರಸ್ತರಿಗೆ ಸಹಾಯ ಮಾಡಲು ಜಾಗೃತ ಸಮಿತಿಯನ್ನು ರಚಿಸುವಂತೆ ಜಿಲ್ಲಾಡಳಿತಗಳಿಗೆ ಸೂಚಿಸಿದ್ದಾರೆ.



ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ನಾಗಲಕ್ಷ್ಮಿ, ಮಹಿಳೆಯರಿಂದ ಹಲವಾರು ಕಿರುಕುಳ ದೂರುಗಳು ಬರುತ್ತಿವೆ ಎಂದು ಹೇಳಿದರು. ನಾನು ಅನೇಕ ಸ್ಥಳಗಳಿಗೆ, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಭೇಟಿ ನೀಡಿದಾಗ, ಬಹಳಷ್ಟು ಮಹಿಳೆಯರು ಮುಂದೆ ಬಂದು ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು ತಮ್ಮನ್ನು ಹೇಗೆ ಮಾನಸಿಕವಾಗಿ ಹಿಂಸಿಸುತ್ತಿದ್ದಾರೆ ಎಂಬುದರ ಬಗ್ಗೆ ವಿವರಿಸಿದರು.

## ಕಸಾಪದಿಂದ ಗಣರಾಜ್ಯೋತ್ಸವ

**ದಾವಣಗೆರೆ:** ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ದಾವಣಗೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಾಗೂ ವಿನೂತನ ಮಹಿಳಾ ಸಮಾಜದ ಸಂಯುಕ್ತಾಶ್ರಯದಲ್ಲಿ ವಿದ್ಯಾನಗರದ ಕುವೆಂಪು ಕನ್ನಡ ಭವನದಲ್ಲಿ 76 ನೇ ಗಣರಾಜ್ಯೋತ್ಸವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಸಾಪ ಸಂಘಟನಾ ಕಾರ್ಯದರ್ಶಿ ಸಿ.ಜಿ. ಜಗದೀಶ್ ಕೂಲಂಬಿ ಹೇಳಿದರು.

ಇಂದು ಭಾನುವಾರ ಮುಂಜಾನೆ 8.15 ಘಂಟೆಗೆ ಕುವೆಂಪು ಕನ್ನಡ ಭವನದಲ್ಲಿ ನಡೆಯಲಿರುವ ಗಣರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರ ಧ್ವಜಾರೋಹಣವನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ. ವಾಮದೇವಪ್ಪ ನೆರವೇರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಬಿ. ಪರಮೇಶ್ವರಪ್ಪ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷೆ ಸುಮತಿ ಜಯಪ್ಪ, ವಿನೂತನ ಮಹಿಳಾ ಸಮಾಜದ ಅಧ್ಯಕ್ಷೆ ಜಿ.ಎಸ್. ಪ್ರೇಮ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಬಿ. ದಿಳ್ಯಪ್ಪ, ರೇವಣಸಿದ್ದಪ್ಪ ಅಂಗಡಿ, ಗೌರವ ಕೋಶಾಧ್ಯಕ್ಷ ಕೆ. ರಾಘವೇಂದ್ರ ನಾಯರಿ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಕೆ. ಶಿವಶಂಕರ್ ಸಮಾರಂಭದಲ್ಲಿ ಉಪಸ್ಥಿತರಿರುವರು.

## ಆರೋಪಿ ಕರೆದೊಯ್ದು ಘಟನೆ ಮರುಸೃಷ್ಟಿಸಿದ ಪೊಲೀಸರು

**ಮುಂಬೈ:** ಮುಂಬೈ ಪೊಲೀಸರು ಬಾಲಿವುಡ್ ನಟ ಸೈಫ್ ಅಲಿ ಖಾನ್ ಮೇಲೆ ಚಾಕುವಿನಿಂದ ದಾಳಿ ನಡೆಸಿದ ಆರೋಪಿಯನ್ನು ಮಂಗಳವಾರ ಬಾಂದ್ರಾದಲ್ಲಿರುವ ನಟನ ನಿವಾಸಕ್ಕೆ ಕರೆದೊಯ್ದು, ಅಪರಾಧದ ಕೃತ್ಯವನ್ನು ಮರುಸೃಷ್ಟಿಸಿದರು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. 20 ಅಧಿಕಾರಿಗಳ ತಂಡ ಇಂದು ಬೆಳಗ್ಗೆ 5.30 ರ ಸುಮಾರಿಗೆ ನಾಲ್ಕು ಪೊಲೀಸ್ ವ್ಯಾನ್‌ಗಳಲ್ಲಿ ಸದ್ಗುರು ಶರಣ್ ಅಪಾರ್ಟ್ ಮೆಂಟ್ ಗೆ ತೆರಳಿತ್ತು ಮತ್ತು ಒಂದು ಗಂಟೆಯ ಕಾಲ ಘಟನೆಯನ್ನು ಮರು ಸೃಷ್ಟಿಸಿದರು ಎಂದು ಅಧಿಕಾರಿ ಹೇಳಿದ್ದಾರೆ.

### ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ–ಪ್ರಧಾನಿ ಮೋದಿ ಭೇಟಿ;

## ರಕ್ಷಣಾ ಉತ್ಪಾದನೆಯಲ್ಲಿ ಮಹತ್ವದ ಗುರಿ!

**ಇಂಡೋನೇಷ್ಯಾ:** ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ 3 ದಿನಗಳ ಭಾರತ ಪ್ರವಾಸ ಕೈಗೊಂಡಿದ್ದು, ಪ್ರಧಾನಿ ನರೇಂದ್ರ ಮೋದಿ ಇಂದು ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ಉಭಯ ದೇಶಗಳು ಒಟ್ಟಾರೆ ದ್ವಿಪಕ್ಷೀಯ ಸಂಬಂಧಗಳಿಗೆ, ಪ್ರಮುಖವಾಗಿ ರಕ್ಷಣಾ ಉತ್ಪಾದನೆ ಮತ್ತು ಪೂರೈಕೆ ಸರಪಳಿಗಳ ಕ್ಷೇತ್ರದಲ್ಲಿನ ಒಪ್ಪಂದಗಳಿಗೆ ಆವೇಗ ನೀಡುವುದಕ್ಕೆ ಒಪ್ಪಿಗೆ ಸೂಚಿಸಿದ್ದಾರೆ.

ಜ.26 ರಂದು ನಡೆಯಲಿರುವ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಸುಬಿಯಾಂಟೊ ಮುಖ್ಯ ಅತಿಥಿಯಾಗಿದ್ದಾರೆ. ಮಾತುಕತೆಯ ನಂತರ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಮೋದಿ,



ಇಂಡೋನೇಷ್ಯಾವನ್ನು 10 ರಾಷ್ಟ್ರಗಳ ಆಸಿಯಾನ್ ಒಕ್ಕೂಟದಲ್ಲಿ ಮತ್ತು ಇಂಡೋ–ಪೆಸಿಫಿಕ್‌ನಲ್ಲಿ ಭಾರತದ "ಪ್ರಮುಖ ಪಾಲುದಾರ" ಎಂದು ಬಣ್ಣಿಸಿದ್ದಾರೆ.

ಎರಡೂ ದೇಶಗಳು ಈ ಪ್ರದೇಶದಲ್ಲಿ ನಿಯಮ ಆಧಾರಿತ ಕ್ರಮಕ್ಕೆ ಬದ್ಧವಾಗಿವೆ ಎಂದು ಮೋದಿ ತಿಳಿಸಿದ್ದಾರೆ.

"ಅಂತರರಾಷ್ಟ್ರೀಯ ಕಾನೂನಿಗೆ ಅನುಗುಣವಾಗಿ ನೌಕಾಯಾನ ಸ್ವಾತಂತ್ರ್ಯವನ್ನು ಖಚಿತಪಡಿಸಿಕೊಳ್ಳಬೇಕು ಎಂದು ನಾವು ಒಪ್ಪುತ್ತೇವೆ" ಎಂದು ಇಂಡೋ–ಪೆಸಿಫಿಕ್ ಪ್ರದೇಶದಲ್ಲಿ ಚೀನಾದ ಹೆಚ್ಚುತ್ತಿರುವ ಮಿಲಿಟರಿ ಬಲವರ್ಧನೆಯ ಬಗ್ಗೆ ಜಾಗತಿಕವಾಗಿ ಹೆಚ್ಚುತ್ತಿರುವ ಕಳವಳಗಳ ನಡುವೆ ಮೋದಿ ಹೇಳಿರುವುದು ಗಮನಾರ್ಹವಾಗಿದೆ.

ನಮ್ಮ ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳ ಕುರಿತು ನಾವು ವ್ಯಾಪಕ ಚರ್ಚೆಗಳನ್ನು ನಡೆಸಿದ್ದೇವೆ" ಎಂದು ಪ್ರಧಾನಿ ಹೇಳಿದರು, ಭಾರತ ಮತ್ತು ಇಂಡೋನೇಷ್ಯಾ ರಕ್ಷಣಾ ಉತ್ಪಾದನೆ ಮತ್ತು ಪೂರೈಕೆ ಸರಪಳಿಗಳಲ್ಲಿ ಜಂಟಿಯಾಗಿ ಕೆಲಸ ಮಾಡಲು ಒಪ್ಪಿಕೊಂಡಿವೆ ಎಂದು ಹೇಳಿದರು.

## ಆಮಿಷಕ್ಕೆ ಒಳಗಾಗದೇ ನಿರ್ಭೀತಿಯಿಂದ ಮತದಾನ ಮಾಡಿ : ರೋಣ ವಾಸುದೇವ್

**ಚಿತ್ರದುರ್ಗ:** ದೇಶದ ಅಭಿವೃದ್ಧಿಗೆ ಉತ್ತಮ ನಾಯಕರು ಅಗತ್ಯ. ಅಂತಹ ನಾಯಕರ ಆಯ್ಕೆ ಮಾಡಲು ಮತದಾರರು ಯಾವುದೇ ಆಮಿಷಗಳಿಗೆ ಒಳಗಾಗದೇ ನಿರ್ಭೀತಿಯಿಂದ ಮತದಾನ ಮಾಡಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ ವಾಸುದೇವ್ ಹೇಳಿದರು.

ನಗರದ ತರಾಸು ರಂಗಮಂದಿರಲ್ಲಿ ಶನಿವಾರ ಭಾರತ ಚುನಾವಣಾ ಆಯೋಗ ಹಾಗೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಸ್ವೀಪ್ ಸಮಿತಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯುವಕರು ಹಾಗೂ ವಿದ್ಯಾರ್ಥಿಗಳು ನಿಮ್ಮ ಮನೆಗಳಲ್ಲಿ




ಮತದಾನದ ಮಹತ್ವ ತಿಳಿಸಿ ಪ್ರತಿಯೊಬ್ಬರು ಮತದಾನ ಚಲಾಯಿಸುವಂತೆ ಪ್ರೇರೇಪಿಸಬೇಕು. 18 ವರ್ಷ ತುಂಬಿದ ಯುವಕರು ಆನ್‌ಲೈನ್ ಮೂಲಕವೇ ಮತದಾರರ ಪಟ್ಟಿ ಸೇರ್ಪಡೆಗೆ ಅರ್ಜಿ ಹಾಕಬಹುದು. ಮುದ್ರಿತ ಗುರುತಿನ ಚೀಟಿ ನಿಮ್ಮ ಮನೆಬಾಗಿಲಿಗೆ ಬರುತ್ತದೆ. ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಂಡ ಎಲ್ಲರೂ ಮತದಾನದಲ್ಲಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ಭಾರತ ಚುನಾವಣಾ ಆಯೋಗ ಒಂದು ಸ್ವಾಯತ್ತ ಸಂಸ್ಥೆಯಾಗಿದೆ. ಚುನಾವಣೆಗಳನ್ನು ಕಾಲಕಾಲಕ್ಕೆ ನಡೆಸುವ ಜವಾಬ್ದಾರಿ ಚುನಾವಣಾ ಆಯೋಗಕ್ಕೆ ಇದೆ. 18 ವರ್ಷ ತುಂಬಿದ ಎಲ್ಲ ನಾಗರಿಕರಿಗೆ ಚುನಾವಣೆಯಲ್ಲಿ ಮತದಾನ ಮಾಡುವ ಹಕ್ಕು ಪ್ರಾಪ್ತವಾಗುತ್ತದೆ. ಚುನಾವಣೆ ಆಯೋಗ ಎಲ್ಲ ಅರ್ಹ ಮತದಾರ ಪಟ್ಟಿಯನ್ನು ತಯಾರಿಸುವ ಹಾಗೂ ಕಾಲಕಾಲಕ್ಕೆ ಪರಿಷ್ಕರಿಸುವ ಕಾರ್ಯನಿರ್ವಹಿಸುತ್ತದೆ. ಮರಣ ಹೊಂದಿದವರು, ದೇಶದ ಪೌರತ್ವ ತ್ಯಜಿಸಿ, ವಿದೇಶಗಳಿಗೆ ಹೋದವರ ಹೆಸರುಗಳನ್ನು ಮತದಾರ ಪಟ್ಟಿಯಿಂದ ಚುನಾವಣೆ ಆಯೋಗ ತೆಗೆದು ಹಾಕುತ್ತದೆ. 18 ವರ್ಷ ತುಂಬಿದವರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡುವುದು ಅತ್ಯಂತ ದೊಡ್ಡ ಕೆಲಸವಾಗಿದೆ. ಇವರಿಗೆ ಹೊಸದಾಗಿ ಗುರುತಿನ ಚೀಟಿ ನೀಡಲಾಗುತ್ತದೆ. ಇದರಿಂದ ಯುವಕರಿಗೆ ಮತದಾನ ಮಾಡುವ ಪವಿತ್ರ ಹಕ್ಕು ಲಭ್ಯವಾಗುತ್ತದೆ ಎಂದು ಹೇಳಿದರು.

ರಸ್ತೆ ಸರಿಯಿಲ್ಲ, ಮೂಲಭೂತ ಸೌಕರ್ಯಗಳು ಇಲ್ಲ, ಜನಪ್ರತಿನಿಧಿಗಳು ನಮ್ಮ ಮಾತು ಕೇಳುತ್ತಿಲ್ಲ ಎಂದು ನಾವೆಲ್ಲರೂ ದೂರುತ್ತೇವೆ. ಆದರೆ ಈ ಪ್ರಶ್ನೆಗಳನ್ನು ಕೇಳುವ ನೈತಿಕತೆ ನಮಗಿದೆಯೇ ಎಂದು ಪ್ರಶ್ನಿಸಿಕೊಂಡಾಗ ಅದಕ್ಕೆ ಉತ್ತರ ದೊರಕುವುದಿಲ್ಲ. ಇಂದಿಗೂ ದೇಶದಲ್ಲಿ ಚುನಾವಣೆಗಳಲ್ಲಿ ಮತದಾನ ಮಾಡುವವರ ಸಂಖ್ಯೆ ಕಡಿಮೆ ಇದೆ ಎಂದರು.

### ರಾಷ್ಟ್ರೀಯ ಮತದಾರರ ದಿನಾಚರಣೆ

## ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಪಾತ್ರ ಅತ್ಯಂತ ಮಹತ್ತರ : ನ್ಯಾ. ಭಾನುಮತಿ

**ಚಿಕ್ಕಮಗಳೂರು: ಜ. 25:** ಭಾರತ ವಿಶ್ವದಲ್ಲೇ ಅತೀ ದೊಡ್ಡ ಹಾಗೂ ಶ್ರೇಷ್ಠ ಪ್ರಜಾಪ್ರಭುತ್ವ ರಾಷ್ಟ್ರ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಪಾತ್ರ ಅತ್ಯಂತ ಮಹತ್ತರವಾದದ್ದು ಎಂದು ಪ್ರಭಾರ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಭಾನುಮತಿ ಬಿ.ಸಿ. ಹೇಳಿದರು.

ಭಾರತ ಚುನಾವಣಾ ಆಯೋಗ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಚಿಕ್ಕಮಗಳೂರು ಇವರ ಸಂಯುಕ್ತಾಶ್ರಯದಲ್ಲಿ ನಗರದ ಕುವೆಂಪು ಕಲಾಮಂದಿರದಲ್ಲಿ ಇಂದು ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತವು ಆಡಳಿತಾತ್ಮಕವಾಗಿ ಭೌಗೋಳಿಕವಾಗಿ ಹಾಗೂ ಸಾಂಸ್ಕೃತಿಕವಾಗಿ ವಿಶಿಷ್ಟತೆಯನ್ನು ಹೊಂದಿದ ದೇಶವಾಗಿದೆ. ಅಂಬೇಡ್ಕರ್ ನೀಡಿದ ಸಂವಿಧಾನದಿಂದಲೇ 18 ವರ್ಷ ತುಂಬಿದ ಪ್ರತಿಯೊಬ್ಬ




ಭಾರತೀಯರಿಗೂ ಮತದಾನ ಮಾಡುವ ಹಕ್ಕಿದೆ. ಅದೇ ರೀತಿ ಭಾರತೀಯ ಪ್ರಜೆಗಳು ಜವಾಬ್ದಾರಿಯಿಂದ ನಿರ್ವಹಿಸಬೇಕಾದ ಕರ್ತವ್ಯಗಳನ್ನು ತಿಳಿಸಿದೆ ಎಂದು ಹೇಳಿದರು.

ಉತ್ತಮ ರಾಜಕೀಯ ವ್ಯವಸ್ಥೆಯನ್ನು ಆಯ್ಕೆ ಮಾಡುವಲ್ಲಿ ಮತದಾನ ಪ್ರಮುಖ ಪಾತ್ರವಹಿಸುತ್ತದೆ. ಪ್ರತಿಯೊಂದು ಮತಕ್ಕೂ ಅಮೂಲ್ಯವಾದ ಮೌಲ್ಯವಿದ್ದು, ಒಂದು ಮತದಿಂದ ಸೋಲು ಗೆಲುವನ್ನು ಕಂಡಿರುವ ಉದಾಹರಣೆಗಳಿವೆ. ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡಲು ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕು. 2025ನೇ ಮತದಾರರ ದಿನಾಚರಣೆಯನ್ನು ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ. ಹನುಮಂತಪ್ಪ ಮಾತನಾಡಿ ಮತದಾನ ಎಂಬುದು ವಜ್ರಾಯುಧ ಇದ್ದಂತೆ ಮತದಾರರು ಯಾವುದೇ ಆಸೆ, ಆಮಿಷ, ಜಾತಿ, ಧರ್ಮಕ್ಕೆ ಮರುಳಾಗದೆ ಮತದಾನದ ಹಕ್ಕು ಚಲಾಯಿಸಿ ಪ್ರಜಾಪ್ರಭುತ್ವದ ವ್ಯವಸ್ಥೆ ಉಳಿಸಬೇಕು. 18 ವರ್ಷ ತುಂಬಿದ ಎಲ್ಲಾ ಯುವಕ, ಯುವತಿಯರು ಮತದಾರರ ಪಟ್ಟಿಯಲ್ಲಿ ತಪ್ಪದೆ ತಮ್ಮ ಹೆಸರು ಸೇರಿಸಬೇಕು ಎಂದ ಅವರು. ಸಂವಿಧಾನದ ಘನತೆ ಎತ್ತಿ ಹಿಡಿಯಲು ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸುವ ಮೂಲಕ ಸುಭದ್ರ **(3ನೇ ಪುಟಕ್ಕೆ)**

### ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ

## ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪ್ರತಿಭಾ ಕಾರಂಜಿ ಸಹಕಾರಿ : ಸಂಕನೂರ




**ಗದಗ, ಜ, 25:** ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ ತಿಳಿಸಿದರು.


ಗದಗ ಬೆಟಗೇರಿಯ ಲೊಯೊಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆ ಆವರಣದಲ್ಲಿ ಶನಿವಾರ ಗದಗ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಮಾನಸಿಕ, ದೈಹಿಕ ಹಾಗೂ ಭಾವನಾತ್ಮಕ ಬೆಳವಣಿಗೆಗೆ ಸರ್ಕಾರದಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಪ್ರತಿಭಾ ಕಾರಂಜಿಯೂ ಸಹ ಒಂದು ಮಹತ್ವದ ಕಾರ್ಯಕ್ರಮವಾಗಿದ್ದು ಮಕ್ಕಳಲ್ಲಿ ಸುಪ್ತವಾಗಿರುವ ಪ್ರತಿಭೆಯನ್ನು ತಿಳಿದುಕೊಂಡು ಅದನ್ನು ಪ್ರೋತ್ಸಾಹಿಸಿ ಬೆಳೆಸುವುದು ಅವಶ್ಯಕವಾಗಿದೆ. ಮಕ್ಕಳು ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಬೇಕಾದರೆ ಉದಾಸೀನ ಮನೋಭಾವನೆ ಹೊಂದದೇ ಉತ್ಸಾಹದಿಂದ ಮುನ್ನುಗ್ಗಬೇಕು ಕರೆ ನೀಡಿದರು.

ಸ್ವಾಮಿ ವಿವೇಕಾನಂದರು ಹೇಳಿದಂತೆ ದೇವರು ಪ್ರತಿಯೊಬ್ಬರಿಗೂ ಒಂದೊಂದು ತರಹ ಶಕ್ತಿ ಸಾಮರ್ಥ್ಯ ಕೊಟ್ಟಿರುತ್ತಾನೆ. ಆ ಸಾಮರ್ಥ್ಯದಿಂದ ಜೀವನದಲ್ಲಿ ನಾವು ಏನನ್ನಾದರೂ ಸಾಧಿಸಿ ಸಮಾಜಕ್ಕೆ ಕೊಡುಗೆ ನೀಡಬೇಕು. ಸಂಗೀತ ಕ್ಷೇತ್ರಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರವಾಗಿದ್ದು, ಡಾ. ಭೀಮಸೇನ ಜೋಶಿ, ವೀರೇಶ್ವರ ಪುಣ್ಯಾಶ್ರಮದ ಪಂಡಿತ ಪುಟ್ಟರಾಜ ಗವಾಯಿಗಳು ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಜಿಲ್ಲೆಯ ರಾಜು ಬಗಾಡೆ, ಸುನೀಲ ಜೋಶಿ ಹೀಗೆ ಅನೇಕರು ವಿವಿಧ ಕ್ಷೇತ್ರಗಳಲ್ಲಿ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ವಿಜೇತರಾದವರು ರಾಜ್ಯ ಮಟ್ಟದಲ್ಲಿ ಪಾಲ್ಗೊಂಡು ಗದಗ ಜಿಲ್ಲೆಗೆ ಕೀರ್ತಿ ತಂದುಕೊಡಬೇಕು ಎಂದು ಶಾಸಕ ಎಸ್.ವಿ.ಸಂಕನೂರ ಮಕ್ಕಳನ್ನು ಹುರಿದುಂಬಿಸಿದರು.

## ಕ್ರೇನ್ ಚಾಲಕ–ಪೌರ ಕಾರ್ಮಿಕನ ನಡುವೆ ಜಟಾಪಟಿ: ಹಲ್ಲೆ ಆರೋಪ

**ದಾವಣಗೆರೆ:** ವಿನೋಬನಗರದ ಮೊದಲೇ ಮುಖ್ಯ ರಸ್ತೆಯ ಶಿವಲಿಂಗೇಶ್ವರ ದೇವಸ್ಥಾನದ ಬಳಿ ಮಹಾನಗರ ಪಾಲಿಕೆಯ ಪೌರ ಕಾರ್ಮಿಕನ ಮೇಲೆ ಕ್ರೇನ್ ಚಾಲಕ ಹಲ್ಲೆ ನಡೆಸಿದ್ದಾನೆ ಎಂಬ ಆರೋಪ ಕೇಳಿ ಬಂದಿದೆ.



ಇಂದು ಬೆಳಿಗ್ಗೆ 8 ಗಂಟೆಯ ಸಮಯದಲ್ಲಿ ವಿನೋಬನಗರದ ಒಂದನೇ ಮುಖ್ಯ ರಸ್ತೆಯಲ್ಲಿ ಈ ಘಟನೆ ನಡೆದಿದ್ದು, ವಿನೋಬನಗರದ ಉರ್ದು ಶಾಲೆಯಿಂದ ಕಸ ತುಂಬಿಕೊಂಡು ಬರುತ್ತಿದ್ದರು. ಈ ವೇಳೆ ರಸ್ತೆಯಲ್ಲಿ ಕ್ರೇನ್ ಅಡ್ಡಲಾಗಿ ನಿಲ್ಲಿಸಲಾಗಿತ್ತು. ವಾಹನ ಹೋಗಲು, ಕಸ ತುಂಬಿಸಿಕೊಳ್ಳಲು, ಶಾಲೆಗೆ ಮಕ್ಕಳು ಹೋಗಲು ತೊಂದರೆ ಆಗುತ್ತಿದೆ ಕ್ರೇನ್ ತೆಗೆಯಿರಿ ಎಂದು ಪೌರಕಾರ್ಮಿಕರು ಮನವಿ ಮಾಡಿದ್ದಾರೆ.

ಆದರೆ, ಕ್ರೇನ್ ಗೆ ಸಂಬಂಧಿಸಿದ ವ್ಯಕ್ತಿ ಯಾರನ್ನು ಕರೆಯಿಸುತ್ತಿಯೋ ಕರೆಸಿ. ಕ್ರೇನ್ ತೆಗೆಯಲ್ಲ ಎಂದು ಹೇಳಿದ್ದಾನೆ. ಈ ವೇಳೆ ಮಾತಿಗೆ ಮಾತು ಬೆಳೆದಿದೆ. ಆಗ ಕ್ರೇನ್ ಚಾಲಕ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ. ಅಲ್ಲದೇ ಪೌರ ಕಾರ್ಮಿಕನ ಮೇಲೆ ಹಲ್ಲೆ ನಡೆಸಿದ್ದಾನೆ ಎಂದು ಪೌರಕಾರ್ಮಿಕರು ಆರೋಪಿಸಿದ್ದಾರೆ.

ಕ್ರೇನ್ ತೆಗೆಯುವಂತೆ ಹೆಲ್ತ್ ಇನ್ ಸ್ಪೆಕ್ಟರ್ ಹಾಗೂ ದಫೇದಾರ್ ಅವರು ಹೇಳಿದರೂ ಕ್ರೇನ್ ಚಾಲಕ ಧಿಮಾಕಿನಿಂದ ವರ್ತಿಸಿದ್ದಾನೆ. ಈ ಸಂಬಂಧ ಪಾಲಿಕೆ ಸದಸ್ಯರು ಹಾಗೂ ಕಮೀಷನರ್ ಗೆ ಮಾಹಿತಿ ನೀಡಿದ್ದೇವೆ. ದೂರು ಕೊಟ್ಟು ಬನ್ನಿ ಎಂದು ಹೇಳಿದ್ದಾರೆ ಎಂದು ಪೌರಕಾರ್ಮಿಕರು ತಿಳಿಸಿದ್ದಾರೆ.

ಕ್ರೇನ್ ಚಾಲಕನು ಕೊರಳಪಟ್ಟಿಗೆ ಕೈ ಹಾಕುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿದ ಪೌರ ಕಾರ್ಮಿಕರು ಪರಿಸ್ಥಿತಿ ನಿಯಂತ್ರಣಕ್ಕೆ ತಂದಿದ್ದಾರೆ. ಪೌರ ಕಾರ್ಮಿಕನ ಹಲ್ಲೆ ನಡೆಸಿದವನನ್ನು ಕೂಡಲೇ ಬಂಧಿಸಿ, ಕಾನೂನು ಕ್ರಮ ಜರುಗಿಸಬೇಕು ಎಂದು ಪೌರಕಾರ್ಮಿಕರು ಒತ್ತಾಯಿಸಿದ್ದಾರೆ.

## ಸಂಸ್ಕೃತಿ– ಸಂಸ್ಕಾರ ಸಹಿತ ಶಿಕ್ಷಣದಿಂದ ಸತ್ಪ್ರಜೆಗಳ ಸೃಷ್ಟಿ ಸಾಧ್ಯ –ಡಾ. ಹೆಚ್.ಬಿ. ಮಂಜುನಾಥ್



**ದಾವಣಗೆರೆ:** ಕೇವಲ ಶಿಕ್ಷಣದಿಂದಲೇ ಸತ್ಪ್ರಜೆಗಳನ್ನು ನಿರೀಕ್ಷಿಸಲು ಸಾಧ್ಯವಿಲ್ಲ. ಶಿಕ್ಷಣದೊಂದಿಗೆ ನೆಲದ ಸಂಸ್ಕೃತಿ ಹಾಗೂ ಮೌಲ್ಯಯುತ ಸಂಸ್ಕಾರಗಳ ಅರಿವು ಮಾಡಿಸಿದಲ್ಲಿ ಮಾತ್ರ ಸತ್ಪ್ರಜೆಗಳನ್ನು ಸೃಷ್ಟಿಸಲು ಸಾಧ್ಯ ಎಂದು ಹಿರಿಯ ಪತ್ರಕರ್ತ ಡಾ. ಎಚ್ ಬಿ ಮಂಜುನಾಥ ಅಭಿಪ್ರಾಯ ಪಟ್ಟರು.

ನಗರದ ಎಸ್ ಓ ಜಿ ಕಾಲೋನಿಯಲ್ಲಿರುವ ನಿಸರ್ಗ ಕಾನ್ವೆಂಟ್ ಮತ್ತು ಪ್ರೌಢಶಾಲಾ 'ನಿಸರ್ಗೋತ್ಸವ' ಉದ್ಘಾಟಿಸಿ ಮಾತನಾಡುತ್ತಾ ಪೋಷಕರು ಮಕ್ಕಳಿಗೆ ಶಾಲಾ ಶಿಕ್ಷಣದ ಕೊಡಿಸಿದರೆ ಸಾಲದು, ದಿನವೂ ಮನೆಯಲ್ಲಿ ಮಕ್ಕಳೊಂದಿಗೆ ಸ್ವಲ್ಪ ವೇಳೆಯಾದರೂ ಆತ್ಮೀಯವಾಗಿ ಮಾತನಾಡುತ್ತಾ ಕಾಲಕಳೆಯಬೇಕು, ತನ್ಮೂಲಕ ನಮ್ಮ ಸಂಸ್ಕೃತಿ ಸಂಸ್ಕಾರಗಳು ಮಕ್ಕಳ ಅರಿವಿಗೆ ಬರಬೇಕು ಎಂದರು.

ದಿನದಲ್ಲಿ ಒಂದು ಹೊತ್ತಾದರೂ ಊಟ ಅಥವಾ ತಿಂಡಿಯನ್ನು ಮನೆ ಮಂದಿಯೆಲ್ಲ ಒಟ್ಟಾಗಿ ಕುಳಿತು ಸೇವಿಸಬೇಕು, ಹಾಗೆ ಆಹಾರ ಸೇವಿಸುವಾಗ ಸೇವಿಸುವಾಗ ಟಿವಿ ಮತ್ತು ಮೊಬೈಲ್ ಇತ್ಯಾದಿಗಳ ಕಡೆ ಗಮನ ಕೊಡದೆ ಪರಸ್ಪರ ತಮಾಷೆ ಮಾಡಿಕೊಳ್ಳುತ್ತಾ ಇರಬೇಕು, ಇದರಿಂದ ಕೌಟುಂಬಿಕ ಬಾಂಧವ್ಯವು ಗಟ್ಟಿಗೊಳ್ಳುತ್ತದೆ, ಮುಂದೆ ಮಕ್ಕಳು ಪೋಷಕರನ್ನು ವೃದ್ಧಾಶ್ರಮಕ್ಕೆ ದೂಡುವುದು ತಪ್ಪುತ್ತದೆ ಎಂದರು.

ಅನ್ಯ ಭಾಷೆಗಳನ್ನು ದ್ವೇಷಿಸದೆ ನಮ್ಮ ಮಾತೃಭಾಷೆ ಹಾಗೂ ಮಾತೃ ಸಂಸ್ಕೃತಿಯನ್ನು ಉಳಿಸಿಕೊಳ್ಳಬೇಕು ಎಂದರು. ಮುಖ್ಯ ಅತಿಥಿಗಳಾಗಿ ಮಾತನಾಡಿದ ನಿಂಚನ ಪಬ್ಲಿಕ್ ಶಾಲಾ ಸ್ಥಾಪಕ ನಿಂಗಪ್ಪನವರು ಜೀವನದ ಸಾಧನೆಯ ಮಾರ್ಗಗಳ ಬಗ್ಗೆ ಪೋಷಕರು ಮಕ್ಕಳಿಗೆ ತಿಳಿಸುತ್ತಿರಬೇಕು ಎಂದರು.

ಮತ್ತೋರ್ವ ಮುಖ್ಯ ಅತಿಥಿಗಳಾಗಿ ನಸ್ರೀನ್ ಖಾನ್ ಮಾತನಾಡಿ, ಪೋಷಕರು ಮಕ್ಕಳನ್ನು ಅವರ ಉತ್ತಮ ಕಾರ್ಯಗಳಿಗಾಗಿ ಪ್ರೋತ್ಸಾಹಿಸಬೇಕು ಎಂದರು. ಶಾಲಾ ಕಾರ್ಯದರ್ಶಿ ಹೆಚ್.ಜಿ. ಪ್ರಕಾಶರವರ ಉಪಸ್ಥಿತಿಯಲ್ಲಿ ಶಾಲಾ ಅಧ್ಯಕ್ಷ ಬಿ. ಪರಮೇಶ್ವರಪ್ಪ ಅಧ್ಯಕ್ಷೀಯ ನುಡಿಗಳ ನ್ನಾಡಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ವಿರಕ್ತಮಠದ ಡಾ. ಶ್ರೀ ಬಸವ ಪ್ರಭು ಸ್ವಾಮೀಜಿ ಮಾತನಾಡಿ, ಅಲಂಕಾರಗಳು ಬಾಹ್ಯ ಶೃಂಗಾರಕ್ಕಾದರೆ ಸದ್ಗುಣಗಳು ಬದುಕಿನ ಶೃಂಗಾರಕ್ಕೆ ಬೇಕು. ಮಲಿನ ಪರಿಸರದಲ್ಲಿ ಬದುಕದೆ ನಿಸರ್ಗ ಹಾಗೂ ಪರಿಸರ ಕಾಪಾಡುವ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸಬೇಕು ಎಂದರು.

## ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರನೇ ಮಹಾಪ್ರಭು: ಸೈಯದ್ ಕಲೀಂ ಉಲ್ಲಾ



**ಜಗಳೂರು:** ಭಾರತ ದೇಶದ ಅತಿದೊಡ್ಡ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರನೇ ಮಹಾಪ್ರಭು ಎಂದು ತಹಶೀಲ್ದಾರ್ ಸೈಯದ್ ಕಲೀಂ ಉಲ್ಲಾ ಹೇಳಿದರು.

ಪಟ್ಟಣದ ತಾಲೂಕು ಕಛೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.

ವಿಶ್ವದಲ್ಲಿಯೇ ಅತಿದೊಡ್ಡ ಪ್ರಜಾಪ್ರಭುತ್ವ ಹಾಗೂ ಅತ್ಯುತ್ತಮ ಸಂವಿಧಾನ ಹೊಂದಿದ ದೇಶ ನಮ್ಮದು. ಸಂವಿಧಾನ ಬದ್ಧ ಮತದಾನದ ಹಕ್ಕು ಚಲಾಯಿಸಲು ಪ್ರತಿಯೊಬ್ಬ ಪ್ರಜೆಯೂ 18 ವರ್ಷ ಪೂರೈಸಬೇಕು. ನಂತರ ಮತದಾನದ ಹಕ್ಕು ಪಡೆಯಲು ಚುನಾವಣೆ ಶಾಖೆಯಲ್ಲಿ ಹೆಸರು ನೊಂದಣಿ ಮಾಡಿಕೊಂಡು ಸದುಪಯೋಗ ಪಡೆದುಕೊಂಡು ಪತದಾನ ಪ್ರಕ್ರಿಯೆಯಿಂದ ವಂಚಿತರಾಗಬಾರದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿಆರ್ ಸಿ ಡಿಡಿ ಹಾಲಪ್ಪ, ತಾ.ಪಂ. ಎಓ ತಿಪ್ಪೇಸ್ವಾಮಿ, ಸಮಾಜಕಲ್ಯಾಣ ಇಲಾಖೆ ನಿವೃತ್ತ ಸಹಾಯಕ ನಿರ್ದೇಶಕ ಮಹೇಶ್ವರಪ್ಪ ಬಿಸಿಆರ್ ಪಿಗಳಾದ ಬಸವರಾಜಪ್ಪ, ಆಂಜನೇಯ, ನಿಲಯಮೇಲ್ವಿಚಾರಕಿ ಮಂಗಳ ಇನ್ನಿತರರು ಉಪಸ್ಥಿತರಿದ್ದರು.